# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1713 (1922) |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 24.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಅಡಿಕೆ ಬೆಳೆಯ ಒಟ್ಟು ವಿಸ್ತೀರ್ಣವೆಷ್ಟು; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಅಡಿಕೆ ಬೆಳೆಯ ವಿಸ್ತೀರ್ಣ 102107 ಹೆಕ್ಟೇರ್. |
| ಆ) | ಕಳೆದ ಮೂರು ವರ್ಷಗಳ ಬೆಳೆ ವಿಸ್ತೀರ್ಣ ಹಾಗೂ ವಾರ್ಷಿಕ ಉತ್ಪನ್ನದ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ಪ್ರತ್ಯೇಕವಾಗಿ ನೀಡುವುದು; | ಕಳೆದ ಮೂರು ವರ್ಷಗಳ ಅಡಿಕೆ ಬೆಳೆಯ ವಿಸ್ತೀರ್ಣ (ಹೆಕ್ಟೇರ್‌ಗಳಲ್ಲಿ) ಮತ್ತು ಉತ್ಪಾದನೆಯ (ಮೆ.ಟನ್ನುಗಳಲ್ಲಿ) ತಾಲ್ಲೂಕುವಾರು ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಇ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಕೆಲವು ವರ್ಷಗಳಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹಾಗೂ ಬೆಳೆ ಉತ್ಪನ್ನ ಸತತವಾಗಿ ಕಡಿಮೆಯಾಗುತ್ತಾ ಬಂದಿದ್ದು ಇದಕ್ಕೆ ಸರ್ಕಾರ ಗುರುತಿಸಿರುವ ಪ್ರಮುಖ ಕಾರಣಗಳೇನು; | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಬೆಳೆ ವಿಸ್ತೀರ್ಣವು ವರ್ಷದಿಂದ ವರ್ಷಕ್ಕೆ ಸತತವಾಗಿ ಏರಿಕೆ ಆಗಿರುತ್ತದೆ. ಆದರೆ, 2023-24 ನೇ ಸಾಲಿನ ನಂತರ ಬೆಳೆ ಸಮೀಕ್ಷೆಯಲ್ಲಿ Area correction factor ಅನ್ನು ಅಳವಡಿಸಿಕೊಂಡಿದ್ದು, ಬೆಳೆ ವಿಸ್ತೀರ್ಣವು ಗಿಡಗಳ ಸಂಖ್ಯೆಗೆ ಅನುಗುಣವಾಗಿ ಲೆಕ್ಕಾಚಾರ ಮಾಡಲಾಗುವುದರಿಂದ 2022-23 ನೇ ಸಾಲಿಗಿಂತ 2023-24 ಹಾಗೂ 2024-25 ನೇ ಸಾಲಿನಲ್ಲಿ ಅಡಿಕೆ ಬೆಳೆ ವಿಸ್ತೀರ್ಣವು ಕಡಿಮೆ ದಾಖಲಾಗಿರುತ್ತದೆ. ಆದರೆ ವಾಸ್ತವಿಕವಾಗಿ ಅಡಿಕೆ ಬೆಳೆ ವಿಸ್ತೀರ್ಣ ಹಾಗೂ ಅಡಿಕೆ ಬೆಳೆಗಾರರ ಸಂಖ್ಯೆ ಹೆಚ್ಚಾಗಿರುತ್ತದೆ. |
| ಈ) | ಜಿಲ್ಲೆಯಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹಾಗೂ ಬೆಳೆ ಉತ್ಪನ್ನ ಕುಸಿತ ತಡೆಗಟ್ಟಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು; | ಜಿಲ್ಲೆಯಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣ ಹಾಗೂ ಬೆಳೆ ಉತ್ಪನ್ನ ಕುಸಿತ ತಡೆಗಟ್ಟಲು ಕೈಗೊಂಡ ಕ್ರಮಗಳು ಕೆಳಗಿನಂತಿವೆ:<br><br>1. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ (MGNREGA) ಅಡಿಯಲ್ಲಿ ಮಲೆನಾಡು ತಾಲ್ಲೂಕುಗಳಲ್ಲಿ ಅಡಿಕೆ ತೋಟಗಳನ್ನು ನಿರ್ಮಾಣ ಮಾಡಲು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಹಾಗೂ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಕೂಲಿ ಹಾಗೂ ಸಾಮಗ್ರಿ ವೆಚ್ಚಸೇರಿ ಪ್ರತಿ ಹೆಕ್ಟೇರ್ ಗೆ ಅಡಿಕೆ ಬೆಳೆಗೆ ರೂ. 1.96 ಲಕ್ಷಗಳವರೆಗೆ ನೆರವು ನೀಡಲಾಗುತ್ತಿದೆ. |
| ಉ) | ಜಿಲ್ಲೆಯಲ್ಲಿ ಅಡಿಕೆ ಬೆಳೆಯ ವಿಸ್ತೀರ್ಣವನ್ನು ಹೆಚ್ಚಿಸಲು ಹಾಗೂ ಬೆಳೆ ಉತ್ಪನ್ನದ ಕುಸಿತವನ್ನು ತಡೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? | |

| | | |
|---|---|---|
| | | 2. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ರಾಷ್ಟ್ರೀಯ ಕೃಷಿ ಸಿಂಚಾಯಿ ಯೋಜನೆಯಡಿ (PMRKVY-PMDC) ಅಡಿಕೆ ಬೆಳೆಗೆ ಎಲ್ಲಾ ವರ್ಗದ ರೈತರಿಗೆ 2 ಹೆಕ್ಟೇರ್ ವರೆಗೆ 90% ಹಾಗೂ 2 ಹೆಕ್ಟೇರ್ ಮೇಲ್ಪಟ್ಟು 5 ಹೆಕ್ಟೇರ್ ವರೆಗೆ 45% ರಷ್ಟು ಸಹಾಯಧನ ನೀಡಲಾಗುತ್ತಿದೆ.<br><br>3. ವಿವಿಧ ಯಂತ್ರೋಪಕರಣಗಳಿಗೆ ಕೇಂದ್ರ ಸರ್ಕಾರದ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಯೋಜನೆಯಡಿ ಸಾಮಾನ್ಯ ವರ್ಗಕ್ಕೆ 40% ರಂತೆ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ 50% ರಂತೆ ಸಹಾಯಧನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಈ ಯೋಜನೆಯಡಿ ಅಡಿಕೆ ಸುಲಿಯುವ ಯಂತ್ರ, ಅಡಿಕೆ ಒಣಗಿಸುವ ಯಂತ್ರ, ಅಡಿಕೆ ಬೇಯಿಸುವ ಯಂತ್ರ, ಅಡಿಕೆ ಕೊಯ್ಲು ಮಾಡುವ ಉಪಕರಣ ಹಾಗೂ ಔಷಧಿ ಸಿಂಪಡಿಸುವ ಯಂತ್ರಗಳಿಗೆ ಸಹಾಯಧನ ನೀಡಲಾಗುತ್ತಿದೆ.<br><br>4. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ (NHM) ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದಲ್ಲಿ, 30%ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ರಂತೆ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ.<br><br>5. ಪ್ರಸಕ್ತ ಸಾಲಿನಲ್ಲಿ ಅಡಿಕೆ ಬೆಳೆಗೆ ಬಾಧಿಸುವ ಎಲೆಚುಕ್ಕೆ ರೋಗ, ಹಳದಿ ಎಲೆ ರೋಗ ಹಾಗೂ ಕೊಳೆ ರೋಗಗಳ ನಿರ್ವಹಣೆಗಾಗಿ CPCRI (Central Plantation Crops Research Institute), ಕಾಸರಗೋಡು ಸಂಸ್ಥೆಯು ಒಂದು ಪ್ಯಾಕೇಜ್ ಶಿಫಾರಸ್ಸು ಮಾಡಿದ್ದು, ಈ ಅನ್ವಯ ಫೈಟೋಸಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಸಸ್ಯ ಸಂರಕ್ಷಣಾ ಕ್ರಮಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಒಟ್ಟಾರೆ ರೂ.577.76 ಕೋಟಿಗಳ ಪ್ರಸ್ತಾವನೆಯನ್ನು ಸಿದ್ಧಪಡಿಸಲಾಗಿದೆ. ಇದರಲ್ಲಿ NHM-MIDH ಮಾರ್ಗಸೂಚಿಯನ್ವಯ 30% ರಷ್ಟು ಸಹಾಯಧನದಂತೆ ಒಟ್ಟು ರೂ.173.33 ಕೋಟಿಗಳನ್ನು (ಕೇಂದ್ರ ಪಾಲು ರೂ.103.99 |

| | | | |
|---|---|---|---|
| | | | ಕೋಟಿಗಳು (60%) ಹಾಗೂ ರಾಜ್ಯ ಪಾಲು ರೂ.69.33 ಕೋಟಿಗಳು (40%)) ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.<br><br>6. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ರವರ ತಜ್ಞರ ಸಹಯೋಗದೊಂದಿಗೆ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳು ಹಾಗೂ ತರಬೇತಿ ಮತ್ತು ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. |

ಸಂಖ್ಯೆ: HORTI 160 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿ ಕೆಸಚಿವರು

LCQ 1922

# ಅನುಬಂಧ

## ದಕ್ಷಿಣ ಕನ್ನಡ ಜಿಲ್ಲೆಯ ಅಡಿಕೆ ಬೆಳೆಯ ಕಳೆದ ಮೂರು ವರ್ಷಗಳ ವಿಸ್ತೀರ್ಣ ಮತ್ತು ಉತ್ಪಾದನೆಯ ವಿವರ

| ಕ್ರ. ಸಂ. | ತಾಲ್ಲೂಕಿನ ಹೆಸರು | 2022-23 | | 2023-24 | | 2024-25 | |
|---|---|---|---|---|---|---|---|
| | | ವಿಸ್ತೀರ್ಣ (ಹೆಕ್ಟೇರ್ ಗಳಲ್ಲಿ) | ಉತ್ಪಾದನೆ (ಮೆ.ಟನ್ನುಗಳಲ್ಲಿ) | ವಿಸ್ತೀರ್ಣ (ಹೆಕ್ಟೇರ್ ಗಳಲ್ಲಿ) | ಉತ್ಪಾದನೆ (ಮೆ.ಟನ್ನುಗಳಲ್ಲಿ) | ವಿಸ್ತೀರ್ಣ (ಹೆಕ್ಟೇರ್ ಗಳಲ್ಲಿ) | ಉತ್ಪಾದನೆ (ಮೆ.ಟನ್ನುಗಳಲ್ಲಿ) |
| 1 | ಬಂಟ್ವಾಳ | 21382 | 28972 | 19087 | 25863 | 18106 | 24534 |
| 2 | ಬೆಳ್ತಂಗಡಿ | 28860 | 37865 | 24763 | 32489 | 24657 | 32350 |
| 3 | ಕಡಬ | 16020 | 21387 | 15700 | 20960 | 17002 | 22697 |
| 4 | ಮಂಗಳೂರು | 1673 | 2376 | 1286 | 1826 | 1513 | 2149 |
| 5 | ಮೂಡಬಿದ್ರೆ | 4539 | 6354 | 4243 | 5940 | 4879 | 6830 |
| 6 | ಮುಲ್ಕಿ | 168 | 237 | 187 | 265 | 100 | 141 |
| 7 | ಪುತ್ತೂರು | 16854 | 22753 | 15700 | 21194 | 15916 | 21486 |
| 8 | ಸುಳ್ಯ | 18095 | 24464 | 16535 | 22355 | 18286 | 24722 |
| 9 | ಉಳ್ಳಾಲ | 2078 | 2931 | 1693 | 2387 | 1649 | 2325 |
| | **ಒಟ್ಟು** | **109669** | **147339** | **99194** | **133280** | **102107** | **137235** |